ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1214

ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 07.03.2022

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದವರಿಗೆ ವಿಶೇಷ ಭತ್ಯೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ	ಸಾರ್ವಜನಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಇತರೆ ಎಲ್ಲಾ ವೃಂದದ ಬೋಧಕರಿಗೆ ವಿಶೇಷ ಭತ್ಯೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಇ	ಹಾಗಿದ್ದಲ್ಲಿ, ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದವರಿಗೆ ವಿಶೇಷ ಭತ್ಯೆ ನೀಡದೇ ಇರಲು ಕಾರಣಗಳೇನು;	5ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ / ಅನುದಾನಿತ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜಿನ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಿ ದಿನಾಂಕ 12-05-2006ರ ಸರ್ಕಾರಿ ಆದೇಶ ಸಂಖ್ಯೆ: ಆಇ 14 ಎಸ್.ಆರ್.ಪಿ 2006ರಲ್ಲಿ ಆದೇಶಗಳನ್ನು ಹೊರಡಿಸಲಾಗಿತ್ತು. ತದನಂತರ ಈ ಭತ್ಯೆಯನ್ನು ಪರಿಷ್ಕರಿಸಿ ಮುಂದುರಿಸಲಾಗಿರುತ್ತದೆ ಮತ್ತು ಅಂತಿಮವಾಗಿ ದಿನಾಂಕ 09-05-2012ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 264 ಎಸ್.ಎಲ್.ಬಿ 2012ರಲ್ಲಿ ಸದರಿ ಭತ್ಯೆಯನ್ನು ಪರಿಷ್ಕರಿಸಲಾಗಿರುತ್ತದೆ.
ಈ	ಇದರಿಂದ ಸರ್ಕಾರ ತಾರತಮ್ಯ ಮಾಡಿದಂತಾಗಿಲ್ಲವೇ;	
ಉ	ಸದರಿಯವರಿಗೆ ಯಾವ ಕಾಲಮಿತಿಯಲ್ಲಿ ವಿಶೇಷ ಭತ್ಯೆ ನೀಡಲಾಗುವುದು	

			ಪರಿಷ್ಕೃತ ವಿಶೇಷ ಭತ್ಯೆಯ ಆದೇಶದಲ್ಲಿಯೂ ಸಹ ಪ್ರೌಢ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಈ ಭತ್ಯೆಯನ್ನು ಮಂಜೂರು ಮಾಡಿರುವುದಿಲ್ಲ. 5ನೇ ರಾಜ್ಯ ವೇತನ ಆಯೋಗವು ಸಹ, ಸರ್ಕಾರಿ / ಅನುದಾನಿತ ಶಾಲೆಗಳ ಶಿಕ್ಷಕರುಗಳಿಗೆ ಮಂಜೂರು ಮಾಡಿರುವಂತೆ ವಿಶೇಷ ಭತ್ಯೆಯನ್ನು ಪ್ರೌಢ ಶಾಲೆಗಳ ಮುಖ್ಯಶಿಕ್ಷಕರುಗಳಿಗೂ ಕೂಡ ಮಂಜೂರು ಮಾಡುವಂತೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲ. ರಾಜ್ಯ ಸರ್ಕಾರಿ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ ಇತ್ತೀಚೆಗೆ ರಚಿಸಲಾಗಿದೆ. 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ, ಶಿಕ್ಷಣ ಇಲಾಖೆಯ ಶಿಕ್ಷಕರನ್ನು ಒಳಗೊಂಡಂತೆ ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ದಿನಾಂಕ 01-07-2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಆಯೋಗದ ಶಿಫಾರಸ್ಸಿನಂತೆ, ಸರ್ಕಾರಿ/ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ನೀಡಲಾಗುತ್ತಿದ್ದ ಮಾಸಿಕ ವಿಶೇಷ ಭತ್ಯೆಯನ್ನು ಅನ್ವಯಿಸುವ ಶಿಕ್ಷಕರ ಮೂಲ ವೇತನದೊಂದಿಗೆ ವಿಲೀನಗೊಳಿಸಿ ವೇತನ ಶ್ರೇಣಿಗಳನ್ನು ದಿನಾಂಕ 01-07-2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶ ಹೊರಡಿಸಿದ್ದು, ಈ ವಿಶೇಷ ಭತ್ಯೆಯ ಎಲ್ಲಾ ಆದೇಶಗಳನ್ನು ದಿನಾಂಕ 01-04-2018ರಿಂದ ಜಾರಿಗೆ ಬರುವಂತೆ ನಿರಸನಗೊಳಿಸಿ (ರದ್ದುಪಡಿಸಿ) ದಿನಾಂಕ 19-04-2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 6 ಎಸ್.ಆರ್.ಪಿ 2018ರಲ್ಲಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಇದು ಸರ್ಕಾರದ ನೀತಿ ನಿರ್ಣಯವಾಗಿರುತ್ತದೆ.

		ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರುಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ನೀಡುತ್ತಿರುವ ವಿಶೇಷ ಭತ್ಯೆಯನ್ನು ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೂ ಮಂಜೂರು ಮಾಡುವಂತೆ ಆಡಳಿತ ಇಲಾಖೆಯಾಗಲೀ ಅಥವಾ ಮುಖ್ಯ ಶಿಕ್ಷಕ ವೃಂದದ ನೌಕರರ ಸಂಘಟನೆಗಳಾಗಲೀ 6ನೇ ರಾಜ್ಯ ವೇತನ ಆಯೋಗಕ್ಕೆ ಯಾವುದೇ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ. ವೇತನ ಆಯೋಗವು ಸಹ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಿ ವೇತನ ಪರಿಷ್ಕರಿಸುವಂತೆ ಶಿಫಾರಸ್ಸು ಮಾಡಿರುವುದಿಲ್ಲ. ಈ ಮೇಲೆ ತಿಳಿಸಿದ ದಿನಾಂಕ 19-04-2018ರ ಆದೇಶದನ್ವಯ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಮಂಜೂರು ಮಾಡಲಾಗಿದ್ದ ವಿಶೇಷ ಭತ್ಯೆಯ ಎಲ್ಲಾ ಆದೇಶಗಳನ್ನು ದಿನಾಂಕ 01-04-2018ರಿಂದ ಜಾರಿಗೆ ಬರುವಂತೆ ನಿರಸನಗೊಳಿಸಿರುವುದರಿಂದ ಪ್ರಸ್ತುತ ವಿಶೇಷ ಭತ್ಯೆಯ ಆದೇಶಗಳು ಚಾಲ್ತಿಯಲ್ಲಿರುವುದಿಲ್ಲ. ಚಾಲ್ತಿಯಲ್ಲಿಲ್ಲದ ಆದೇಶವನ್ನು ಪುನಃಸ್ಥಾಪಿಸಿ ವಿಶೇಷ ಭತ್ಯೆಯನ್ನು ಪುನ: ಮಂಜೂರು ಮಾಡಲು 2018ರ ಪರಿಷ್ಕೃತ ವೇತನ ಶ್ರೇಣಿಯ ನಿಯಮಗಳಲ್ಲಿ ಮತ್ತು ಇತರ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಆದುದರಿಂದ, ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಮಂಜೂರು ಮಾಡಲಾಗಿದ್ದ ವಿಶೇಷ ಭತ್ಯೆಯನ್ನು ಆಧಾರವಾಗಿರಿಸಿ ಚಾಲ್ತಿಯಲ್ಲಿಲ್ಲದ ಆದೇಶದ ಆಧಾರದ ಮೇಲೆ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ದಿನಾಂಕ 01-04-2006 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಮಂಜೂರು ಮಾಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ಸಂಖ್ಯೆ: ಇಪಿ 53 ಎಸ್‌ಎಲ್‌ಬಿ 2022

(ಬಿ.ಸಿ.ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು